15821 ಮು ಉ SL NO:- 82 D:- 23-03-26

## ಕರ್ನಾಟಕ ವಿಧಾನ ಪರಿಷತ್

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು(ದಕ್ಷಿಣ ಕನ್ನಡ-ಉಡುಪಿ ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಶೂನ್ಯ ವೇಳೆಯ ಪ್ರಸ್ತಾಪಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

- - -

ಸೂಚನೆ:- "ಪಂಚಾಯತ್ ರಾಜ್ ಆಯೋಗ ಸ್ಥಾಪನೆಗೆ ಹಣಕಾಸು ಆಯೋಗ ಶಿಫಾರಸ್ಸು" ಎಂಬ ಶೀರ್ಷಿಕೆಯಡಿ ಉದಯವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ಸ್ಥಳೀಯ ಸರ್ಕಾರಗಳು ಎಂದು ಕರೆಸಿಕೊಳ್ಳುವ ಪಂಚಾಯತ್‌ಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಸಮರ್ಥ ನಿರ್ವಹಣೆಗೆ ಪ್ರತ್ಯೇಕ ಆಯೋಗವನ್ನು ರಚಿಸುವಂತೆ 5ನೇ ರಾಜ್ಯ ಹಣಕಾಸು ಆಯೋಗ ಶಿಫಾರಸ್ಸು ಮಾಡಿದೆ. ಸಂವಿಧಾನದ 73ನೇ ತಿದ್ದುಪಡಿ ಪ್ರಕಾರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ-1993 ಪರಿಣಾಮಕಾರಿ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಪಂಚಾಯತ್ ರಾಜ್ ಕುರಿತು ಶಾಸನಬದ್ಧ "ರಾಜ್ಯ ಪಂಚಾಯತ್ ರಾಜ್ ಆಯೋಗ" ಸ್ಥಾಪಿಸುವಂತೆ ಹಣಕಾಸು ಆಯೋಗವು ತನ್ನ ಅಂತಿಮ ವರದಿಯಲ್ಲಿ ಶಿಫಾರಸ್ಸು ಮಾಡಿದೆ.

ಅದೇ ರೀತಿ ಸಂವಿಧಾನದ 74ನೇ ತಿದ್ದುಪಡಿ ಪರಿಣಾಮಕಾರಿ ಅನುಷ್ಠಾನದ ಕುರಿತು ನಗರ ಸ್ಥಳೀಯ ಸಂಸ್ಥೆಗಳ ಶಾಸನಬದ್ಧ "ರಾಜ್ಯ ಆಯೋಗ" ರಚಿಸಬಹುದು ಎಂದೂ ರಾಜ್ಯ ಸರ್ಕಾರಕ್ಕೆ ಹಣಕಾಸು ಆಯೋಗ ಸಲಹೆ ನೀಡಿದೆ. ಫೆಬ್ರವರಿ-26ರಂದು ಆಯೋಗವು ತನ್ನ ಅಂತಿಮ ವರದಿಯನ್ನು ರಾಜ್ಯಪಾಲರು ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದೆ.

ಸಂವಿಧಾನದಲ್ಲಿನ ಅವಕಾಶ ಮತ್ತು ಹಕ್ಕುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಲು ಎಸ್ಸಿ-ಎಸ್ಟಿ, ಅಲ್ಪಸಂಖ್ಯಾತರು ಇತ್ಯಾದಿಗಳ ರಾಷ್ಟ್ರೀಯ ಆಯೋಗಗಳ ಮಾದರಿಯಲ್ಲಿ ಪಂಚಾಯತ್ ರಾಜ್ ಕುರಿತು ಶಾಸನಬದ್ಧ "ರಾಷ್ಟ್ರೀಯ ಪಂಚಾಯತ್ ರಾಜ್ ಆಯೋಗ" ಸ್ಥಾಪನೆ ಮಾಡುವಂತೆ 2013ರಲ್ಲಿ ಕೇಂದ್ರ ಪಂಚಾಯತ್ ರಾಜ್ ಸಚಿವಾಲಯ ರಚಿಸಿದ್ದ ಸಾರ್ವಜನಿಕ ಸೇವೆಗಳ ಪರಿಣಾಮಕಾರಿ ಅನುಷ್ಠಾನ ಕುರಿತಾ ಸಮಿತಿ ಶಿಫಾರಸ್ಸು ಮಾಡಿತ್ತು. ಅದೇ ಮಾದರಿಯಲ್ಲಿ ರಾಜ್ಯ ಪಂಚಾಯತ್ ಆಯೋಗ ರಚನೆಗೆ ಹಣಕಾಸು ಆಯೋಗ ಶಿಫಾರಸ್ಸು ಮಾಡಿದೆ.

ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಎಲ್ಲಾ ಹಂತಗಳಲ್ಲಿ ಹೆಚ್ಚಿನ ಸಂಖ್ಯೆಯ ಹುದ್ದೆಗಳು ಖಾಲಿ ಇದ್ದು ಸದರಿ ಖಾಲಿ ಇರುವ ಹುದ್ದೆಗಳನ್ನು ಆದಷ್ಟು ಭರ್ತಿಗೊಳಿಸುವಂತೆ ಮತ್ತು ಘನತ್ಯಾಜ್ಯ ನಿರ್ವಹಣೆಯಲ್ಲಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟಗಳು ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳಾದ ಬಳಕೆದಾರರ ಶುಲ್ಕ ಸಂಗ್ರಹ, ಮಾರುಕಟ್ಟೆ ಸಂಪರ್ಕಗಳು ಇತ್ಯಾದಿಗಳನ್ನು ಆದ್ಯತೆ ಮೇಲೆ ಪರಿಹರಿಸುವಂತೆ ಮತ್ತು ಗ್ರಾಮ ಪಂಚಾಯಿತಿಗಳು ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಲು ಗಣಿಗಾರಿಕೆ ರಾಜಧನವನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ನ್ಯಾಯಯುತವಾಗಿ ಹಂಚಿಕೆಯಾಗುವುದನ್ನು ಖಚಿತಪಡಿಸಿಕೊಳ್ಳುವುದು ಇತ್ಯಾದಿ ಪ್ರಮುಖ ಶಿಫಾರಸ್ಸುಗಳನ್ನು ಆಯೋಗವು ಮಾಡಿದ್ದು ಸದರಿ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಬೇಕೆಂದು ಈ ಮೂಲಕ ಸರಕಾರವನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

ಉತ್ತರ:- 5ನೇ ರಾಜ್ಯ ಹಣಕಾಸು ಆಯೋಗ 2026-2030ನೇ ಸಾಲಿಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಈ ವರದಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಸಂಸ್ಥೆಗಳು ಸಾಂವಿಧಾನಿಕವಾಗಿ ಪ್ರದತ್ತವಾಗಿರುವ ಜವಾಬ್ದಾರಿಗಳು ಹಾಗೂ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993ರ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಶಾಸನಬದ್ಧ ರಾಜ್ಯ ಪಂಚಾಯತ್ ರಾಜ್ ಆಯೋಗವನ್ನು ಸ್ಥಾಪಿಸುವಂತೆ ಶಿಫಾರಸ್ಸು ಮಾಡಿರುತ್ತದೆ.

5ನೇ ರಾಜ್ಯ ಹಣಕಾಸು ಆಯೋಗದ ವರದಿಯು ಇತ್ತೀಚೆಗೆ ಸರ್ಕಾರದಲ್ಲಿ ಸ್ವೀಕೃತಗೊಂಡಿದ್ದು, ಈ ವರದಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಸಂಸ್ಥೆಗಳು ಸಂವಿಧಾನವಾಗಿ ಪ್ರದತ್ತವಾಗಿರುವ ಜವಾಬ್ದಾರಿಗಳು ಹಾಗೂ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993ರ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಶಾಸನಬದ್ಧ ರಾಜ್ಯ ಪಂಚಾಯತ್ ರಾಜ್ ಆಯೋಗವನ್ನು ಸ್ಥಾಪಿಸುವಂತೆ ಶಿಫಾರಸ್ಸು ಮಾಡಿರುವುದನ್ನು ನಿಯಮಾನುಸಾರ ಪರಿಶೀಲಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 01 ಸಹಿಮ 2026 ದಿನಾಂಕ:27.02.2026 ರಲ್ಲಿ ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆ ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಲು ನೀಡಲಾಗಿರುವ ನಿರ್ದೇಶನಗಳನ್ವಯ ಗ್ರಾಮ ಪಂಚಾಯತಿಯಲ್ಲಿ ಖಾಲಿಯಿರುವ ಸಿಬ್ಬಂದಿ ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1 ಮತ್ತು ಗ್ರೇಡ್-2), ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ನೇರ [illegible] ಕ್ರಮ ವಹಿಸಲಾಗುತ್ತದೆ.

ಗ್ರಾಮೀಣ ಪ್ರದೇಶ ಘನ ತ್ಯಾಜ್ಯ ನಿರ್ವಹಣೆಗೆ ರಾಜ್ಯ ಸರ್ಕಾರ ಈಗಾಗಲೇ ಕರ್ನಾಟಕ ಪಂಚಾಯತ್ ರಾಜ್(ಘನತ್ಯಾಜ್ಯ ನಿರ್ವಹಣೆ) ಮಾದರಿ ಉಪವಿಧಿಗಳು 2020ನ್ನು ರಚಿಸಿರುತ್ತದೆ. ಘನ ತ್ಯಾಜ್ಯ ನಿರ್ವಹಣೆಗಾಗಿ ಬಳಕೆದಾರರ ಶುಲ್ಕವನ್ನು ಪಡೆದುಕೊಳ್ಳಲು ಈ ಉಪವಿಧಿಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿಯು ತ್ಯಾಜ್ಯ ಉತ್ಪಾದಕರಿಂದ ಮಾಹೆಯಾನ ಪಡೆಯಬಹುದಾದ ಬಳಕೆದಾರರ ಶುಲ್ಕವನ್ನು ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟಗಳ ಮೂಲಕ ಸಂಗ್ರಹಿಸಿ ಘನತ್ಯಾಜ್ಯ ಘಟಕಗಳ ನಿರ್ವಹಣೆಗೆ ಬಳಸಲಾಗುತ್ತಿದೆ. ಮರು ಬಳಕೆ ತ್ಯಾಜ್ಯ ವಿಂಗಡಿಸಿ ಮಾರಾಟ ಮಾಡುವ ಮೂಲಕ ದೊರೆಯುವ ಸಂಪನ್ಮೂಲವನ್ನು ಸಹ ಘನ ತ್ಯಾಜ್ಯ ಘಟಕಗಳ ನಿರ್ವಹಣೆಗೆ ಬಳಸಲಾಗುತ್ತಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಸಲಾಗುತ್ತಿರುವ ಗಣಿಗಾರಿಕೆಯ ರಾಜಧನವನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯು ಸಂಗ್ರಹಿಸುತ್ತಿದ್ದು, ಈ ರಾಜಧನವನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಬಿಡುಗಡೆಗೊಳಿಸುತ್ತಿದೆ. ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟಗಳು ಎದುರಿಸುತ್ತಿರುವ ಇತರೆ ಸಮಸ್ಯೆಗಳನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ:ಗ್ರಾಅಪಂರಾ 110 ಜಿಪಸ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.